# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1180**
ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭಾ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 18.03.2025
ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ, ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಕೃಷಿ ಉತ್ಪನ್ನ ಮಂಡಳಿಯಲ್ಲಿನ ಜೋಳ ಖರೀದಿಯಲ್ಲಿ ಅಕ್ರಮವಾಗಿದೆಯೇ; | ಹೌದು,<br>ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕು ವ್ಯಾಪ್ತಿಯ 08 ಜೋಳ ಖರೀದಿ ಕೇಂದ್ರಗಳಲ್ಲಿ 13,156.70 ಕ್ವಿಂಟಾಲ್ , ಜೋಳವನ್ನು ಹೆಚ್ಚುವರಿಯಾಗಿ ಖರೀದಿಸಿ ದಾಸ್ತಾನು ಮಾಡಿರುವುದು ಅಕ್ರಮವಾಗಿರುತ್ತದೆ ಎಂದು ತನಿಖಾ ತಂಡದ ವರದಿಯಿಂದ ಕಂಡುಬಂದಿರುತ್ತದೆ. |
| ಆ) | ಆಗಿದ್ದಲ್ಲಿ, ಅಕ್ರಮದಲ್ಲಿ ಭಾಗಿಯಾಗಿದ್ದ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ? | ಶ್ರೀ ಶಾಂತಗೌಡ ಗುಣಕಿ, ಹಿಂದಿನ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ರಾಯಚೂರು ಜಿಲ್ಲೆ ಹಾಗೂ ಶ್ರೀ ಕೃಷ್ಣ, ಹಾಲಿ ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ರಾಯಚೂರು ಜಿಲ್ಲೆ ರವರುಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ದೋಷಾರೋಪಣಾ ಪಟ್ಟಿ ಅನುಬಂಧ 1-4ಗಳನ್ನು ಆರೋಪಿತ ಅಧಿಕಾರಿಗಳಿಗೆ ಜಾರಿ ಮಾಡಲು ಸರ್ಕಾರದಲ್ಲಿ ಪರಿಶೀಲಿಸಲಾಗುತ್ತಿದೆ,<br><br>ಈ ಪ್ರಕರಣದಲ್ಲಿ ಆಪಾದಿತ ಅಧಿಕಾರಿಗಳಲ್ಲಿ ಒಬ್ಬರಾದ ಶ್ರೀ ಕೃಷ್ಣ, ಉಪ ನಿರ್ದೇಶಕರು, ರಾಯಚೂರು ಜಿಲ್ಲೆ ಇವರ ವಿರುದ್ಧವೂ ಸಹ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮಗಳಡಿ ಶಿಸ್ತು ಕ್ರಮ ಕೈಗೊಳ್ಳುತ್ತಿರುವುದರಿಂದ ಸದರಿಯವರನ್ನು ಉಪ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ರಾಯಚೂರು ಜಿಲ್ಲೆ ಹುದ್ದೆಯಲ್ಲಿ ಮುಂದುವರೆಸುವುದು ಸೂಕ್ತವಲ್ಲವೆಂದು ತೀರ್ಮಾನಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಇ-ಆನಾಸ 51 ಆಇಸೇ 2025, ದಿ: 12.03.2025 ರಲ್ಲಿ ಅವರ ಮಾತೃ ಇಲಾಖೆಯಾದ ಆರ್ಥಿಕ ಇಲಾಖೆಗೆ ಹಿಂದಿರುಗಿಸಿ ಆದೇಶಿಸಲಾಗಿರುತ್ತದೆ.<br><br>ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕು ವ್ಯಾಪ್ತಿಯ 08 ಜೋಳ ಖರೀದಿ ಕೇಂದ್ರಗಳಿಗೆ ಸಂಬಂಧಪಟ್ಟ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳುವಂತೆ ದಿನಾಂಕ: 27.09.2024 ಮತ್ತು 24.02.2025ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು ಇವರನ್ನು ಕೋರಲಾಗಿರುತ್ತದೆ. |

ಸಂಖ್ಯೆ: ಇ-ಆನಾಸ 54 ಆಇಸೇ 2025

(ಕೆ.ಹೆಚ್.ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ, ಇಲಾಖಾ ಸಚಿವರು.